# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 507

ಮಾನ್ಯ ಸದಸ್ಯರ ಹೆಸರು : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 16.09.2021

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಸರ್ಕಾರವು ದಿನಾಂಕ: 01.01.2004 ರಿಂದ ಜಾರಿಗೊಳಿಸಿರುವ ನೂತನ ಪಿಂಚಣಿ ಯೋಜನೆಯ ಸಂಬಂಧ ದಿನಾಂಕ: 01.01.2004ರ ನಂತರದಲ್ಲಿ ಆಯ್ಕೆ ಪಟ್ಟಿಗಳನ್ನು ಪ್ರಕಟಿಸಿ ನೇಮಕಾತಿ ಆದೇಶಗಳನ್ನು ನೀಡಿರುವಂತಹ ಪ್ರಕರಣಗಳಿಗೆ ಹಳೆ ಪಿಂಚಣಿ ಯೋಜನೆ (ಒ.ಪಿ.ಎಸ್.) ಅನ್ವಯವಾಗುತ್ತದೆಂದು ಮಾನ್ಯ ದೆಹಲಿ ಉಚ್ಛ ನ್ಯಾಯಾಲಯವು ತೀರ್ಪು ನೀಡಿದ್ದು, ಈ ತೀರ್ಪನ್ನು ಮಾನ್ಯ ಸರ್ವೋಚ್ಛ ನ್ಯಾಯಾಲಯವು ಸಹ ಎತ್ತಿ ಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ |
| ಆ) | ಬಂದಿದಲ್ಲಿ, ರಾಜ್ಯ ಸರ್ಕಾರವು ದಿನಾಂಕ: 01.01.2006 ರಿಂದ ನೂತನ ಪಿಂಚಣಿ ಯೋಜನೆಯನ್ನು (ಎನ್.ಪಿ.ಎಸ್.) ಜಾರಿಗೆ ತಂದಿದ್ದು, ಈ ಯೋಜನೆಯು ಜಾರಿಗೆ ಬರುವ ಪೂರ್ವದಲ್ಲಿ ಸರ್ಕಾರದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 02.06.2005ರಂದು ಅಧಿಸೂಚನೆ ಹೊರಡಿಸಿ ಈ ಸಂಬಂಧ ದಿನಾಂಕ: 25.09.2005ರಂದು ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ ಅದೇ ವರ್ಷದ ಡಿಸೆಂಬರ್ 2005ರ ಮಾಹೆಯಲ್ಲಿ ಅರ್ಹ ಅಭ್ಯರ್ಥಿಗಳ ದಾಖಲಾತಿಗಳ ಪರಿಶೀಲನೆಯನ್ನು ಸಹ ಕೈಗೊಂಡು ಆಯ್ಕೆ ಪಟ್ಟಿಗಳನ್ನು ಮಾತ್ರ ದಿನಾಂಕ: 01.04.2006ರ ನಂತರದಲ್ಲಿ ಪ್ರಕಟಿಸಿ ನೇಮಕಾತಿ ಆದೇಶಗಳನ್ನು ನೀಡಲಾಗಿದ್ದು, ಇಂತಹ ಪ್ರಕರಣಗಳಿಗೆ ಒಳಪಡುವ ನೌಕರರಿಗೆ ಹಳೆ ಪಿಂಚಣಿ ಯೋಜನೆ (ಒ.ಪಿ.ಎಸ್.) ಅನ್ವಯವಾಗುವುದಿಲ್ಲವೇ; | ಉದ್ಭವಿಸುವುದಿಲ್ಲ |
| ಇ) | ಅನ್ವಯವಾದಲ್ಲಿ, ರಾಜ್ಯದಲ್ಲಿ ಇಂತಹ ಪ್ರಕರಣಗಳಿಗೆ ಒಳಪಡುವ ನೌಕರರನ್ನು ಗುರುತಿಸಿ ಅವರಿಗೆ ಹಳೆ ಪಿಂಚಣಿ ಯೋಜನೆ (ಒ.ಪಿ.ಎಸ್.) ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇಂತಹ ಪ್ರಕರಣಗಳಿಗೆ ಒಳಪಡುವ ನೌಕರರನ್ನು ಯಾವ ಕಾಲ ಮಿತಿಯೊಳಗೆ ಹಳೆ ಪಿಂಚಣಿ ಯೋಜನೆಯ (ಒ.ಪಿ.ಎಸ್.) ವ್ಯಾಪ್ತಿಗೆ ತರಲಾಗುವುದು? (ಸಂಪೂರ್ಣ ವಿವರ ನೀಡುವುದು). | |

ಆಇ 157 ಪಿಇಎನ್ 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ